ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಆನ್‌ಲೈನ್ ಶಿಕ್ಷಣ ಹಾಗೂ ಶಾಲಾ ಕಾಲೇಜು ತೆರೆಯುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

31 (63) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳ ನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ರೋಗದ ಹಿನ್ನಲೆಯಲ್ಲಿ ಶಾಲಾ ಕಾಲೇಜುಗಳನ್ನು ಮುಚ್ಚಲಾಗಿದ್ದು, ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದಂತೆ ಆನ್‌ಲೈನ್ ತರಗತಿಯನ್ನು ಸರ್ಕಾರದ ಸೂಚನೆಯಂತೆ ನಡೆಸಲಾಗುತ್ತಿದ್ದು, ಈ ಶಿಕ್ಷಣವು ಮಕ್ಕಳ ಬೌಧಿಕ ಬೆಳವಣಿಗೆಗೆ ಪೂರಕವಾಗಿದೆಯೇ;

(ಆ) ಸದರಿ ಆನ್‌ಲೈನ್ ಶಿಕ್ಷಣವನ್ನು ಯಾವ ತರಗತಿಯಿಂದ ಪ್ರಾರಂಭ ಮಾಡಲಾಗಿದೆ;

(ಇ) ಸದರಿ ಶಿಕ್ಷಣ ವ್ಯವಸ್ಥೆಯಿಂದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ನಡುವಿನ ಬಾಂಧವ್ಯವನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದೇ;

(ಈ) ಶಾಲೆಗಳನ್ನು ಪ್ರಾರಂಭ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

(ಉ) ಶಾಲೆಗಳನ್ನು ಪ್ರಾರಂಭ ಮಾಡುವುದಿದ್ದಲ್ಲಿ ಮಕ್ಕಳು ಹಾಗೂ ಶಿಕ್ಷಕರಿಗೆ ಸ್ಯಾನಿಟೈಸರ್ ಮತ್ತು ಮಾಸ್ಕ್ ಬಳಕೆ ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಶಾಲೆಗಳನ್ನು ನಡೆಸುವ ಬಗ್ಗೆ ಸರ್ಕಾರ ಯಾವ ರೀತಿ ಮಾರ್ಗಸೂಚಿಗಳನ್ನು ಹಾಕಿಕೊಂಡಿದೆ?